# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 452 |
| ಸದಸ್ಯರ ಹೆಸರು | ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 13-12-2018 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಮುಖ್ಯಮಂತ್ರಿಗಳು |

| ಪ್ರಶ್ನೆ | ಉತ್ತರ |
|---|---|
| ಅ) ರಾಜ್ಯದಲ್ಲಿ 1995ನೇ ಸಾಲಿನಿಂದ 2001ನೇ ಸಾಲಿನವರೆಗೆ ಪ್ರಾರಂಭವಾಗಿರುವ ಅನುದಾನರಹಿತ ಕನ್ನಡ ಮಾಧ್ಯಮ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; | ಪ್ರಾಥಮಿಕ ಶಾಲೆಗಳ ಸಂಖ್ಯೆ = 1088<br>ಪ್ರೌಢ ಶಾಲೆಗಳ ಸಂಖ್ಯೆ = 883<br>ಪದವಿ ಪೂರ್ವ ಕಾಲೇಜುಗಳ ಸಂಖ್ಯೆ = 241<br>ಪದವಿ ಪೂರ್ವ ಕಾಲೇಜುಗಳಿಗೆ ಮಾದ್ಯಮವಾರು ಮಂಜೂರಾತಿ ಇರುವುದಿಲ್ಲ. |
| ಆ) ಸದರಿ ಶಾಲೆಗಳಲ್ಲಿ ಅಭ್ಯಾಸ ಮಾಡುತ್ತಿರುವ ಆರ್ಥಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ಸರ್ಕಾರದ ಯಾವುದೇ ಉಚಿತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಾರ್ವಜನಿಕ ಶಿಕ್ಷಣ ಇಲಾಖೆಯ ವತಿಯಿಂದ ಅನುದಾನ ರಹಿತ ಪ್ರಾಥಮಿಕ ಶಾಲೆಗಳಲ್ಲಿ ಎಲ್.ಕೆ.ಜಿ. ಯಿಂದ 8ನೇ ತರಗತಿವರೆಗೆ ಆರ್.ಟಿ.ಇ. ಅಡಿಯಲ್ಲಿ ದಾಖಲಾದ ವಿದ್ಯಾರ್ಥಿಗಳಿಗೆ ಉಚಿತವಾಗಿ ಶಿಕ್ಷಣ ನೀಡಲಾಗುತ್ತಿದೆ. ಇದಕ್ಕೆ ಶಾಲೆಗಳಿಗೆ ಶುಲ್ಕ ಮರುಪಾವತಿ ಮಾಡಲಾಗುತ್ತಿದೆ. ಆರ್.ಟಿ.ಇ. ಅಡಿಯಲ್ಲಿ ದಾಖಲಾದ ವಿದ್ಯಾರ್ಥಿಗಳಿಗೆ ಉಚಿತವಾಗಿ ಪಠ್ಯಪುಸ್ತಕಗಳನ್ನೂ ಸಹ ವಿತರಿಸಲಾಗುತ್ತಿದೆ.<br>ಹಿಂದುಳಿದ ವರ್ಗಗಳ ಇಲಾಖೆ, ಅಲ್ಪಸಂಖ್ಯಾತ ಇಲಾಖೆ ಮತ್ತು ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಅನುದಾನರಹಿತ ಪ್ರೌಢಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಉಚಿತವಾಗಿ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ.<br>ಪದವಿಪೂರ್ವ ಕಾಲೇಜುಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗ ಮತ್ತು ಅಲ್ಪಸಂಖ್ಯಾತ ಇಲಾಖೆಯಿಂದ ಅರ್ಹ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ, ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ, ಪ್ರೋತ್ಸಾಹ ಧನ ನೀಡಲಾಗುತ್ತಿದೆ. |
| ಇ) ಆರ್ಥಿಕವಾಗಿ ಹಿಂದುಳಿದಿರುವ ಬಡ ವಿದ್ಯಾರ್ಥಿಗಳಿಗೆ ಉಚಿತ ಸೌಲಭ್ಯಗಳನ್ನು ಕಲ್ಪಿಸಲು ಸರ್ಕಾರ ಕ್ರಮಕೈಗೊಳ್ಳುವುದೇ; (ವಿವರ ನೀಡುವುದು) | ಉದ್ಭವಿಸುವುದಿಲ್ಲ. |
| ಈ) ಸದರಿ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ/ ಬೋಧಕೇತರ ಸಿಬ್ಬಂಧಿಗಳಿಗೆ ವೇತನಾನುದಾನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಹಾಗಾದಲ್ಲಿ, ಯಾವ ಕಾಲಮಿತಿಯಲ್ಲಿ ವೇತನಾನುದಾನ ನೀಡಲಾಗುವುದು? | ದಿನಾಂಕ:01-06-1987 ರಿಂದ 1994-95ನೇ ಸಾಲಿನವರೆಗೆ ಪ್ರಾರಂಭಗೊಂಡು ಸತತವಾಗಿ ನಡೆಸಲಾಗುತ್ತಿರುವ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳನ್ನು ಸಹಾಯಾನುದಾನಕ್ಕೆ ಒಳಪಡಿಸಲು ಆಸ್ಪದ ಕಲ್ಪಿಸಲಾಗಿದೆ. 1995ರ ನಂತರ ಪ್ರಾರಂಭಗೊಂಡ ಅನುದಾನ ರಹಿತ ಪ್ರಾಥಮಿಕ ಶಾಲೆ, ಪ್ರೌಢ ಶಾಲೆ ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ಸಹಾಯಾನುದಾನ ವಿಸ್ತರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ. |

ಇಡಿ 485 ಪಿಎಂಸಿ 2018.

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ